# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಮೂಡಲಗಿ.

ಸಿ.ಸಿ. ನಂಃ **318/2014**

ಸಿ.ಡಬ್ಲ್ಯೂ- 15
ಪಿ.ಡಬ್ಲ್ಯೂ- 4

**ದಿನಾಂಕಃ 12-08-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿದಾರರ ಹೆಸರು | : | ಪ್ರತಾತಸಿಂಗ ತೋರಾಟ |
| ತಂದೆಯ/ಗಂಡನ ಹೆಸರು | : | ತುಕಾರಾಮ |
| ವಯಸ್ಸು | : | 55 ವರ್ಷ |
| ಉದ್ಯೋಗ | : | ACP Central Division Mangalore City |
| ವಾಸ ಸ್ಥಳ | : | Mangalore |
| ತಾಲೂಕು | : | Mangalore |

**ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ ಕಲಂ 299 ರ ಅಡಿ ಸಾಕ್ಷಿ ಹೇಳಿಕೆಃ**

ನಾನು ನವೆಂಬರ್ 2001 ರಿಂದ ಅಕ್ಟೋಬರ್ 2006 ರವರೆಗೆ ಮೂಡಲಗಿ ವೃತ್ತದ CPI ಆಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ 23.10.2005 ರಂದು ಪ್ರಕರಣದ ಕಡತವನ್ನು ಚಾಸಾ-14 ರವರಿಂದ ಮುಂದಿನ ತನಿಖೆಗಾಗಿ ಪಡೆದುಕೊಂಡಿರುತ್ತೇನೆ. ದಿಃ 11-01-2006 ರಂದು ಘಟನಾ ಸ್ಥಳಕ್ಕೆ ಭೇಟಿ ನೀಡಿ ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ ಪಂಚರಾದ ಚಾಸಾ 2 ಮತ್ತು 3 ರವರ ಸಮಕ್ಷಮ ಸ್ಥಳ ಪಂಚನಾಮೆಯನ್ನು ಮಧ್ಯಾಹ್ನ 12 ರಿಂದ 1 ರವರೆಗೆ ಮಾಡಿ, ಕಚ್ಚಾ ನಕಾಶೆ ತಯಾರಿಸಿ, ಸ್ಥಳದಲ್ಲಿ ಪಂಚನಾಮೆಗೆ ಪಂಚರ ಸಹಿ ಪಡೆದುಕೊಂಡಿರುತ್ತೇನೆ. ಅದೇ ದಿನ ಚಾಸಾ 1, 4 ರಿಂದ 10 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿಃ 19-04-2006 ರಂದು ಘಟನಾ ಸ್ಥಳಕ್ಕೆ ಸಂಬಂಧಿಸಿದ RTC extract ನ್ನು ಸಂಬಂಧಪಟ್ಟ ಅಧಿಕಾರಿಯಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಅದೇ ದಿನ ಚಾಸಾ 1 ಮತ್ತು 1 ನೇ ಆರೋಪಿಯ ಮದುವೆಗೆ ಸಂಬಂಧಿಸಿದ ಭಾವಚಿತ್ರವನ್ನು ಚಾಸಾ 1 ರವರಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ನಂತರ ಪ್ರಕರಣದಲ್ಲಿ ತನಿಖೆಯನ್ನು ಪೂರ್ಣಗೊಳಿಸಿ ಅದೇ ದಿನ ಆರೋಪಿತರ ವಿರುದ್ಧ ಸಾಕಷ್ಟು ಸಾಕ್ಷ್ಯಾಧಾರಗಳು ಲಭ್ಯವಿದ್ದು, ಆರೋಪ ಸಾಭೀತಾದ ಹಿನ್ನೆಲೆಯಲ್ಲಿ ಮಾನ್ಯ ನ್ಯಾಯಾಲಯಕ್ಕೆ ದೋ. ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**ಮರುವಿಚಾರಣೆಃ ಇರುವುದಿಲ್ಲ.**

ಗಣಕೀಕರಿಸಿ ಓದಿ ಹೇಳಿ ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.

ಪ್ರ. ದ. ನ್ಯಾ ದಂ.,
ಮೂಡಲಗಿ.